ಮಾಡಿದ್ದೀರಿ. ಇದು ಏನಾಗಿದೆ ಎಂದು ನನಗೆ ಉತ್ತರ ಕೊಡಬೇಕು. ಕನಿಷ್ಟ ಈ ಎರಡು ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮಾಡಿಕೊಡಬೇಕೆಂದು ನಾನು ತಮ್ಮ ಮೂಲಕ ವಿನಂತಿ ಮಾಡಿಕೊಳ್ಳುತ್ತೇನೆ.

ಶ್ರೀ ಆರ್.ಅಶೋಕ್:– ಮಾನ್ಯ ಸದಸ್ಯರ ಅಭಿಪ್ರಾಯಕ್ಕೆ ನನ್ನ ಸಹಮತವಿದೆ. ಇದು Backward area ಮಾನ್ಯ ಡಾ: ನಂಜುಂಡಪ್ಪನವರ ವರದಿ ಪ್ರಕಾರ Backward Taluk ಎಂದು ಏನು ಗುರುತು ಮಾಡಿದೆ ಆ ಭಾಗದಲ್ಲಿ ವಿಶೇಷವಾದಂತಹ ಒಂದು ಗಮನವನ್ನು ಕೊಡಬೇಕು ಎಂದು ಸರ್ಕಾರಕ್ಕೆ ಇಚ್ಛೆ ಇದೆ. ಆ ದೃಷ್ಟಿಯಿಂದ ನಾನೀಗ ಮಾನ್ಯ ಮುಖ್ಯ ಮಂತ್ರಿಗಳ ಜೊತೆಯಲ್ಲಿ ಮಾತನಾಡುತ್ತೇನೆ. ಈ ಬಜೆಟ್‌ನಲ್ಲಿ ಈಗಾಗಲೇ most backward ಎಂದು ಏನು ಗುರುತು ಆಗಿವೆ ಅಲ್ಲಿ, ಈಗಾಗಲೇ ಕೇಂದ್ರ ಸರ್ಕಾರ ಘೋಷಣೆ ಮಾಡಿದೆ 30 ಸಾವಿರ ಜನಸಂಖ್ಯೆಗೆ ಒಂದು ಪಿ.ಹೆಚ್. ಸಿ ಯನ್ನು ಕೊಡಬೇಕು ಎಂದು ಪಾಲಿಸಿ ಮಾಡಿದೆ. ಆದರೆ ನಮ್ಮ ಕರ್ನಾಟಕ ರಾಜ್ಯದಲ್ಲಿ ಹಿಂದಿನ ನಮ್ಮ ಆರೋಗ್ಯ ಮಂತ್ರಿಗಳು 25 ಸಾವಿರಕ್ಕೆ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಕೊಟ್ಟಿದ್ದಾರೆ. ಕೇಂದ್ರ ಸರ್ಕಾರದ ಪಾಲಿಸಿಯ ಪ್ರಕಾರ ನಾವು ಇನ್ನು ಹೆಚ್ಚಿಗೆ ಕೊಡುವುದಕ್ಕೆ ಬರುವುದಿಲ್ಲ. ಆದರೆ ವಿಶೇಷವಾಗಿ ಈ ಭಾಗದಲ್ಲಿ ಹೆಚ್ಚಿನ ಅವಶ್ಯಕತೆ ಇದೆ. ಬಡವರಿಗಾಗಿ ಮುಂದಿನ ವರ್ಷದಲ್ಲಿ ಈ ಭಾಗದಲ್ಲಿ ಹೆಚ್ಚಿನ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ಕೊಡಬೇಕೆನ್ನುವ ದೃಷ್ಟಿಯಿಂದ ಆ ಭಾಗಕ್ಕೆ ವಿಶೇಷವಾದಂತಹ ಒಂದು ವ್ಯವಸ್ಥೆ ಮಾಡಬೇಕು, ಹೆಚ್ಚಿನ ಪಿ ಹೆಚ್ ಸಿಗಳನ್ನಾದರೂ ತೆರೆಯಬೇಕು ಆಥವಾ ಇರುವ ಪಿ ಹೆಚ್ ಸಿಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮಾಡುವ ಬಗ್ಗೆ ನಾನು ಹೆಚ್ಚಿನ ಆದ್ಯತೆಯನ್ನು ಕೊಡುತ್ತೇನೆ.

ಅಧ್ಯಕ್ಷರು: ಮಾನ್ಯ ಸದಸ್ಯರ ಪ್ರಶ್ನೆಗೆ ಎರಡು ವಾರಗಳ ಕಾಲಾವಕಾಶವನ್ನು ಕೋರಿದ್ದಾರೆ. ಮುಂದೆ ತೆಗೆದುಕೊಳ್ಳೋಣ. ಈಗ ಪ್ರಶ್ನೋತ್ತರ ವೇಳೆ ಮುಗಿಯಿತು.

(ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು

(ಅನುಬಂಧ–I)

ಶ್ರೀ ಕೆ ಎಸ್. ಈಶ್ವರಪ್ಪ:– ಮಾನ್ಯ ಅಧ್ಯಕ್ಷರೆ, ದಿನಾಂಕ 1ನೇ ಫೆಬ್ರವರಿ 2007 ರಂದು 3ನೇ ಪಟ್ಟಯ ಲಿಖಿತ ಮೂಲಕ ಉತ್ತರಿಸುವ 41 ಪ್ರಶ್ನೆಗಳ ಪೈಕಿ 30 ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತೇನೆ.